**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ, ಜೇವರಗಿ**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆಃ 166/2020**

**ಚಾ.ಸಾ - 7**
**ಪ್ರಾ.ಸಾ - 7**

**ಸಾಕ್ಷಿಗೆ ದಿನಾಂಕ 10-12-2025 ರಂದು ಪ್ರಮಾಣ ವಚನ ಬೋಧಿಸಲಾಯಿತು.**

| | | |
|---|---|---|
| ಸಾಕ್ಷಿಯ ಹೆಸರು | ಃ | ಮೌನೇಶ |
| ತಂದೆಯ ಹೆಸರು | ಃ | ಭೀಮರಾಯ |
| ವಯಸ್ಸು | ಃ | 30 ವರ್ಷ |
| ಉದ್ಯೋಗ | ಃ | ಕೂಲಿ |
| ವಾಸಸ್ಥಳ | ಃ | ಇಜೇರಿ |

**ಮುಖ್ಯವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ**

ನ್ಯಾಯಾಲಯದ ಮುಂದಿರುವ ಆರೋಪಿತರು ನನಗೆ ಗೊತ್ತು. ಚಾಸಾ-1, 4 ರಿಂದ 6, 8 ಮತ್ತು 9 ನನಗೆ ಗೊತ್ತು.

ದಿನಾಂಕ 05-04-2020 ರಂದು ಬೆಳಿಗ್ಗೆ 8-30 ಗಂಟೆಗೆ ಆರೋಪಿತರು ಮತ್ತು ಚಾಸಾ-1ರವರ ಮಧ್ಯೆ ಹೊಲದ ಬದುವಿನ ಬಗ್ಗೆ ಬಹಳ ವರ್ಷಗಳ ಹಿಂದೆ ತಕರಾರು ಇತ್ತು. ಅದೇ ಕಾರಣಕ್ಕೆ ಜಗಳ ಮಾಡಿರುತ್ತಾರೆ.

ಆರೋಪಿತರು ಚಾಸಾ-1ರವರಿಗೆ ಸೇರಿದ ತಿಪ್ಪೆಯಲ್ಲಿ ಇರುವ ಕಸವನ್ನು ತೆಗೆಯುತಿದ್ದರು. ಆಗ ಚಾಸಾ-1 ಮತ್ತು 4ರವರು ಕೇಳಲು ಬಂದಾಗ ನೀವ್ಯಾರು ಕೇಳಕ್ಕೆ ಎಂದು ಅವಾಚ್ಯ ಶಬ್ದಗಳಿಂದ ಬೈದು ನಿಂದನೆ ಮಾಡಿರುತ್ತಾರೆ. 3ನೇ ಆರೋಪಿ ಚಾಸಾ-1ರವರಿಗೆ ಹೊಡೆದಿರುತ್ತಾರೆ. 1ನೇ ಆರೋಪಿ ಚಾಸಾ-4ರವರಿಗೆ ಬಡಿಗೆಯಿಂದ ಹೊಡೆದಿರುತ್ತಾರೆ. 4ನೇ ಆರೋಪಿ ಚಾಸಾ-5ರವರಿಗೆ ಬೈದಿರುತ್ತಾರೆ. ನಿಂಗಣ್ಣರವರಿಗೆ ಪೆಟ್ಟಾಗಿದ್ದರಿಂದ ಆಸ್ಪತ್ರೆಗೆ ಕರೆದುಕೊಂಡು ಹೋದರು. ಇಷ್ಟೇ ಆಗಿರುತ್ತದೆ. ಈ ವಿಚಾರವಾಗಿ ನಾನು ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ.

ಸಾಕ್ಷಿಗೆ ಮು.ಮಾ-1 ಮತ್ತು 2 ನ್ನು ತೋರಿಸಲಾಗಿ ಅವುಗಳನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ.

(ಮಾನ್ಯ ಸ.ಸ.ಅ ರವರು ಸಾಕ್ಷಿ ಭಾಗಶಃ ಪ್ರತಿಕೂಲವಾಗಿ ಸಾಕ್ಷಿ ನುಡಿದಿದ್ದಾರೆ ಹಾಗಾಗಿ ಅವರನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಘೋಷಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಕೋರಿದ್ದು, ಮುಖ್ಯ ವಿಚಾರಣೆಯಲ್ಲಿ ಸಾಕ್ಷಿ ಅಭಿಯೋಜನೆಯ ಪ್ರಕರಣಕ್ಕೆ ವ್ಯತಿರೀಕ್ತವಾಗಿ ಸಾಕ್ಷ್ಯ

ನುಡಿದಿರುವುದು ಮೇಲ್ನೋಟಕ್ಕೆ ಕಂಡುಬಂದಿರುವ ಕಾರಣ ಮಾನ್ಯ ಅಭಿಯೋಜನೆಯವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**<u>ಪಾಟೀ ಸವಾಲುಃ ಮಾನ್ಯ ಸಹಾಯಕ ಸರಕಾರಿ ಅಭಿಯೋಜಕರವರಿಂದ</u>**

ಆರೋಪಿತರೆಲ್ಲರೂ ಕೈಯಲ್ಲಿ ಬಡಿಗೆ ಹಿಡಿದು ಗುಂಪು ಕಟ್ಟಿಕೊಂಡು ಬಂದು ಜಗಳ ಮಾಡಿರುತ್ತಾರೆ ಎಂದರೆ ಸರಿ. 3ನೇ ಆರೋಪಿ ಚಾಸಾ-1ರವರ ಮೈಮೇಲಿನ ಸೀರೆ ಹಿಡಿದು ಎಳೆದಾಡಿ ಅವಮಾನಪಡಿಸಿರುತ್ತಾರೆ ಎಂದರೆ ಸರಿ. 4ನೇ ಆರೋಪಿಯು ಚಾಸಾ-1ರವರಿಗೆ ಕೈಯಿಂದ ಕಪಾಳಕ್ಕೆ ಹೊಡೆದು ಕಾಲಿನಿಂದ ಸೊಂಟಕ್ಕೆ ಹೊಟ್ಟೆಗೆ ಒದ್ದಿರುತ್ತಾನೆ ಎಂದರೆ ಸರಿ. 6ನೇ ಆರೋಪಿಯು ಚಾಸಾ-5ರವರಿಗೆ ಬಡಿಗೆಯಿಂದ ಎರಡು ಕಾಲುಗಳಿಗೆ ಕೈಗಳಿಗೆ ಬೆನ್ನಿಗೆ ಹೊಡೆದಿರುತ್ತಾರೆ ಎಂದರೆ ಸರಿ. 7ನೇ ಆರೋಪಿ ಚಾಸಾ-5ರವರಿಗೆ ಕೈಯಿಂದ ಕಪಾಳಕ್ಕೆ ಹೊಡೆದಿರುತ್ತಾರೆ ಎಂದರೆ ಸರಿ. 8ನೇ ಆರೋಪಿ ಚಾಸಾ-5ರವರ ತಲೆ ಕೂದಲು ಹಿಡಿದು ಜಗ್ಗಾಡಿರುತ್ತಾಳೆ ಎಂದರೆ ಸರಿ. ಆರೋಪಿತರು ತಮ್ಮ ತಂಟೆಗೆ ಬಂದರೆ ಜೀವ ಸಹಿತ ಬಿಡುವುದಿಲ್ಲ ಎಂದು ಚಾಸಾ-1, 4 ಮತ್ತು 5ರವರಿಗೆ ಜೀವದ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿ.

**<u>ಆರೋಪಿತರ ಪರ ವಕೀಲರ ಕೋರಿಕೆಯ ಮೇರೆಗೆ ಸಾಕ್ಷಿಯ ಪಾಟೀ ಸವಾಲನ್ನು ರೂ.300/- ಖರ್ಚಿನೊಂದಿಗೆ ಮುಂದೂಡಲಾಯಿತು.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓ.ಹೇ.ಕೆ.ಸರಿ ಅದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದ.ನ್ಯಾ.ದಂಡಾಧಿಕಾರಿಗಳು ಜೇವರಗಿ